# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ರವರ ನ್ಯಾಯಾಲಯ, ತರೀಕೆರೆ
## ಸಂಚಾರಿ ನ್ಯಾಯಾಲಯ, ಅಜ್ಜಂಪುರ
## ಸಿ.ಸಿ.ನಂಃ 321/2026

**ಫಿರ್ಯಾದುದಾರುಃ** ಸರ್ಕಾರದ ಪರವಾಗಿ ಅಜ್ಜಂಪುರ ಪೋಲೀಸರು

:**ವಿರುದ್ಧ**:

**ಆರೋಪಿಃ** ಶ್ರೀ ಕೇಶವಮೂರ್ತಿ,
ಬಿನ್ ಶ್ರೀ ನಾಗರಾಜಪ್ಪ ,
43 ವರ್ಷ,
ವಾಸಃ ಬಸವೇಶ್ವರ ಬಡಾವಣೆ,
ಅಜ್ಜಂಪುರ ನಗರ.

### ಆಪಾದನೆಯ ಸಾರಾಂಶ

ಶ್ರೀ. ರಾಹುಲ್ ಶೆಟ್ಟಿಗಾರ್, ಬಿ.ಕಾಂ.(Hons.), ಎಲ್ಎಲ್.ಬಿ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕ 07.01.2026 ರಂದು ಬೆಳಿಗ್ಗೆ 10.00 ಗಂಟೆಯಲ್ಲಿ ಅಜ್ಜಂಪುರ ಪೋಲೀಸ್ ಠಾಣಾ ಸರಹದ್ದಿನ ಚನ್ನಾಪುರ-ಗಿರಿಯಾಪುರ ರಸ್ತೆಯ ರೈಲ್ವೆ ಬ್ರಿಡ್ಜ್ ಬಳಿ ನೀವು ಆರೋಪಿ ತಮ್ಮ ಬಾಬ್ತು ಕೆಎ.18.ಎಂಎ.7515 ರ ಇನೋವಾ ಕ್ರಿಸ್ಟಾ ಕಾರನ್ನು ಅತೀವೇಗ ಹಾಗೂ ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಚಾಸಾ-7/ ಶ್ರೀ ಮಾರುತಿ.ಹೆಚ್ ರವರು ಚಾಲನೆ ಮಾಡುತ್ತಿದ್ದ ಕೆಎ.66.ಕ್ಯೂ.7659 ರ ಬೈಕಿಗೆ ಡಿಕ್ಕಿ ಹೊಡೆಸಿರುತ್ತೀರಿ. ಈ ರೀತ್ಯ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತಾ ಕಲಂ 281 ರ ಅನ್ವಯ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ ಎಂದು ಆಪಾದಿಸಲಾಗಿದೆ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಮೇಲ್ಕಂಡ ವಾಹನವನ್ನು ಅತೀವೇಗವಾಗಿ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಚಾಸಾ-7 ರವರ ವಾಹನಕ್ಕೆ ಡಿಕ್ಕಿ ಹೊಡೆಸಿದ ಪರಿಣಾಮ ಚಾಸಾ-7 ರವರ ಬೈಕ್ ಹಿಂಬದಿ ಕುಳಿತಿದ್ದ ಚಾಸಾ-6/ ಶ್ರೀ ಕಾರ್ತಿಕ್ ರವರಿಗೆ ಸಾಮಾನ್ಯ ಸ್ವರೂಪದ ಗಾಯಗಳಾಗಿರುತ್ತವೆ. ಈ ರೀತ್ಯ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತಾ ಕಲಂ 125(ಎ) ರ ಅನ್ವಯ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ ಎಂದು ಆಪಾದಿಸಲಾಗಿದೆ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಮೇಲ್ಕಂಡ ವಾಹನವನ್ನು ಅತೀವೇಗವಾಗಿ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಚಾಸಾ-7 ರವರ ವಾಹನಕ್ಕೆ ಡಿಕ್ಕಿ ಹೊಡೆಸಿದ ಪರಿಣಾಮ ಚಾಸಾ-7 ರವರ ಬೈಕ್ ಹಿಂಬದಿ ಕುಳಿತಿದ್ದ ಚಾಸಾ-6/ ಶ್ರೀ ಕಾರ್ತಿಕ್ ರವರಿಗೆ ತೀವ್ರ ಸ್ವರೂಪದ ಗಾಯಗಳಾಗಿರುತ್ತವೆ. ಈ ರೀತ್ಯ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತಾ ಕಲಂ 125(ಬಿ) ರ ಅನ್ವಯ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ ಎಂದು ಆಪಾದಿಸಲಾಗಿದೆ.

**ಪ್ರಶ್ನೆ:1-** ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

**ಉತ್ತರ:** Yes

**ಪ್ರಶ್ನೆ:2-** ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ನಿಮಗೆ ಯಾವುದಾದರೂ ಪ್ರತಿರಕ್ಷಣೆ ಇದೆಯೇ ?

**ಉತ್ತರ:** Pleads guilty

(ಈ ಮೇಲ್ಕಂಡ ಅಪಾದನೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಹಾಗೂ ಸರಿಯಾಗಿದೆ ಎಂದು ದೃಢೀಕರಿಸುತ್ತೇನೆ.)

**ದಿನಾಂಕ: 18.03.2026** ಸಹಿ/-

**(ರಾಹುಲ್ ಶೆಟ್ಟಿಗಾರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂ., ತರೀಕೆರೆ**
**(ಸಂಚಾರಿ ನ್ಯಾಯಾಲಯ, ಅಜ್ಜಂಪುರ)**

**ಆರೋಪಿಯ ಸಹಿ:**